**ಸಿವಿಲ್ ಜಡ್ಜ್ ಹಾಗೂ ಹೆ.ಪ್ರ.ದ.ನ್ಯಾ.ದಃ ನ್ಯಾಯಾಲಯಃ ತರೀಕೆರೆ**

**ಸಿ.ಸಿ ಸಂಖ್ಯೆ ::1949/2023**

| | | | |
|---|---|---|---|
| **ಸಾಕ್ಷಿದಾರರ ಹೆಸರು** | : | ಫೈರೋಜ್ ಖಾನ್ | **PW**-2 |
| **ತಂದೆಯ ಹೆಸರು** | : | ಸೈಯದ್ ಖಾನ್ | **CW**-2 |
| **ವಯಸ್ಸು** | : | 46 ವರ್ಷ | |
| **ಉದ್ಯೋಗ** | : | ವ್ಯಾಪಾರ | |
| **ವಾಸಸ್ಥಳ** | : | ಕಡೂರು. | |

**ದಿನಾಂಕಃ15-02-2025 ರಂದು ಪ್ರಮಾಣವಚನ ಬೋಧಿಸಲಾಯಿತು.**

**:: ಮುಖ್ಯ ವಿಚಾರಣೆ :: ಮಾನ್ಯ A.P.P ರವರಿಂದ ::**

ನನಗೆ ಈ ಪ್ರಕರಣದ ಬಗ್ಗೆ ಯಾವುದೇ ಮಾಹಿತಿ ಇರುವುದಿಲ್ಲ ಮತ್ತು ನಾನು ಯಾವುದೇ ಅಪಘಾತ ನನ್ನ ಕಣ್ಣಾರೆ ನೋಡಿರುವುದಿಲ್ಲ. ಪೊಲೀಸರು ಯಾವುದೋ ದಾಖಲೆ ಮೇಲೆ ಸಹಿ ಮಾಡಲು ತಿಳಿಸಿದ ಮೇರೆಗೆ ನಾನು ಸಹಿ ಮಾಡಿರುತ್ತೇನೆ. ಅದನ್ನು ಹೊರತುಪಡಿಸಿ ನನಗೆ ಈ ಪ್ರಕರಣದ ಬಗ್ಗೆ ಬೇರೆ ಯಾವುದೇ ಮಾಹಿತಿ ಇರುವುದಿಲ್ಲ.

ಸಾಕ್ಷಿಗೆ ದಿನಾಂಕ 24.07.2023 ರ ಒಂದು ಮಹಜರ್ ಅನ್ನು ತೋರಿಸಲಾಗಿ ಅದರಲ್ಲಿ ಇರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು ಸದರಿ ಮಹಜರ್ ಅನ್ನು ನಿಪಿ2 ಎಂದು ಸಾಕ್ಷಿಯ ಸಹಿಯನ್ನು ನಿಪಿ2 ಎ ಎಂದು ಗುರುತಿಸಲಾಯಿತು. ಸದರಿ ಮಹಜರ್ ಅನ್ನು ಯಾವ ಕಾರಣಕ್ಕೆ ಮಾಡಿರುತ್ತಾರೆ ಎಂದು ನನಗೆ ಗೊತ್ತಿಲ್ಲ. ನಿಪಿ2 ಮಹಜರ್ ನಲ್ಲಿ ಇರುವ ವಿಚಾರಗಳು ನನಗೆ ಗೊತ್ತಿಲ್ಲ. ನನ್ನ ಸಮಕ್ಷಮ ಪೊಲೀಸರು ಯಾವುದೇ ಸ್ಥಳ ಮಹಜರ್ ಅನ್ನು ಮಾಡಿರುವುದಿಲ್ಲ. ನನಗೆ ಈ ಪ್ರಕರಣದ ಬಗ್ಗೆ ಇತರೇ ಯಾವುದೇ ಮಾಹಿತಿ ಇರುವುದಿಲ್ಲ.

ಸಾಕ್ಷಿಗೆ 3 ಫೋಟೋಗಳವನ್ನು ತೋರಿಸಲಾಗಿ ಅದರಲ್ಲಿ ತನ್ನ ಇರುವಿಕೆಯನ್ನು ನೋಡಿ ಗುರುತಿಸಿದ ಮೇರೆಗೆ ಅವುಗಳನ್ನು ಕ್ರಮವಾಗಿ ನಿಪಿ3 ರಿಂದ 5 ಎಂದು ಗುರುತಿಸಲಾಯಿತು. ಸದರಿ ಫೋಟೋಗಳನ್ನು ಎಲ್ಲಿ ಯಾವಾಗ ಯಾವ ಕಾರಣಕ್ಕೆ ತೆಗೆದಿರುತ್ತಾರೆ ಎಂದು ಈಗ ನನಗೆ ನೆನಪಿಲ್ಲ. ನ್ಯಾಯಾಲಯದ ಮುಂದೆ ಇರುವ ಆರೋಪಿ ಯಾರು ಎಂದು ನನಗೆ ಗೊತ್ತಿಲ್ಲ.

(ಈ ಹಂತದಲ್ಲಿ ಮಾನ್ಯ ಎ.ಪಿ.ಪಿ. ಯವರು ಈ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀಸವಾಲು ಮಾಡಲು ಅನುಮತಿ ಕೋರುತ್ತಾರೆ ಅಂತೆಯೇ ಪರಿಗಣಿಸಿ ಅನುಮತಿ ನೀಡಲಾಯಿತು)

**::ಪಾಟೀಸವಾಲು :: ಮಾನ್ಯ A P P ರವರಿಂದ ::**

ದಿನಾಂಕ 10.07.2023 ರಂದು ನಾನು ಶಿವಮೊಗ್ಗದಲ್ಲಿ ಗ್ಯಾಸ್ ತುಂಬಿಸಿಕೊಂಡು ಬರಲು ಹೋಗಿ ವಾಪಸ್ಸು ಕಡೂರಿಗೆ ನನ್ನ ವಾಹನದಲ್ಲಿ ಬರುತ್ತಿದ್ದ ಸಮಯದಲ್ಲಿ ತರೀಕೆರೆ ಬೀರೂರು ಮಧ್ಯೆ ಕುಡ್ಲೂರು ಗೇಟ್ ಬಳಿ ಎನ್ ಹೆಚ್ 206 ರಸ್ತೆಯ over bridge ಕಾಮಗಾರಿ ನಡೆಯುತ್ತಿದ್ದು, ಎಲ್ಲಾ ವಾಹನಗಳು ಸರ್ವಿಸ್ ರಸ್ತೆಯಲ್ಲಿ ಹೋಗಬೇಕಾಗಿದ್ದು ಸಂಜೆ 4.45 ಗಂಟೆ ಸಮಯದಲ್ಲಿ ನನ್ನ ವಾಹನದ ಮುಂದೆ ಒಂದು ಇನ್ನೋವಾ ಕಾರನ್ನು ಅದರ ಚಾಲಕ ಅತಿ ವೇಗ ಹಾಗೂ ಅಜಾಗರುಕತೆಯಿಂದ ಚಲಾಯಿಸಿಕೊಂಡು ಹೋಗಿ ಏಕಾಏಕಿ ಅಡ್ಡದಿಡ್ಡಿಯಾಗಿ ರಸ್ತೆಯ ಎಡ ಬದಿಯ ಚರಂಡಿಯ ಸ್ಲಾಬ್ ಗೆ ಡಿಕ್ಕಿ ಹೊಡೆದು ಚರಂಡಿ ಮೇಲೆ ಹತ್ತಿ ಮಣ್ಣಿನ ಏರಿ ಮೇಲೆ ನಿಂತಿರುವುದನ್ನು ನಾನು ನೋಡಿರುತ್ತೇನೆ ಎಂದರೆ ಸರಿಯಲ್ಲ. ಅದಾದ ತಕ್ಷಣ ನಾನು ನನ್ನ ವಾಹನವನ್ನು ನಿಲ್ಲಿಸಿ ಸದರಿ ಇನ್ನೋವಾ ಬಳಿ ಹೋಗಿ ನೋಡಲಾಗಿ ಅದರಲ್ಲಿ ಆರೋಪಿ ಮತ್ತು ಅವರ ಹೆಂಡತಿ ಕಾರಿನಲ್ಲಿ ಇರುವುದನ್ನು ನಾನು ನೋಡಿ ಅವರನ್ನು ಉಪಚರಿಸಿ ಅವರ ಹೆಸರು ವಿಳಾಸ ಕೇಳಿರುತ್ತೇನೆ ಎಂದರೆ ಸರಿಯಲ್ಲ. ನಂತರ ಆರೋಪಿಯ ಮಗನಾದ ಚಾಸಾ 1 ರವರಿಗೆ ನಾನು ಕರೆ ಮಾಡಿ ಘಟನೆ ಬಗ್ಗೆ ತಿಳಿಸಿರುತ್ತೇನೆ ಎಂದರೆ ಸರಿಯಲ್ಲ. ಸದರಿ ಅಪಘಾತದಿಂದ ಸದರಿ ಕಾರ್ ನಲ್ಲಿ ಇದ್ದ ಮಹಿಳೆಯ ಮೈಕೈಗೆ ಪೆಟ್ಟಾಗಿರುವುದು ಕಂಡು ಬಂದಿದ್ದ ಕಾರಣ ಅವರನ್ನು ಉಪಚರಿಸಿ ತರೀಕೆರೆ ಸರ್ಕಾರಿ ಆಸ್ಪತ್ರೆಗೆ ನಾನು ಮತ್ತು ಇತರೇ ಸಾರ್ವಜನಿಕರು ಕಳುಹಿಸಿಕೊಟ್ಟಿರುತ್ತೇವೆ ಎಂದರೆ ಸರಿಯಲ್ಲ. ನಂತರ ಅಪಘಾತವಾದ ವಾಹನವನ್ನು ಪರಿಶೀಲನೆ ಮಾಡಲಾಗಿ ಅದರ ಟೈಯರ್ ಬ್ಲಾಸ್ಟ್ ಆಗಿದ್ದು ನನಗೆ ಕಂಡು ಬಂದಿದ್ದು ಮತ್ತು ಸದರಿ ವಾಹನದ ನಂಬರ್ KA14N9186 ಆಗಿರುವುದು ನಾನು ಗಮನಿಸಿರುತ್ತೇನೆ ಎಂದರೆ ಸರಿಯಲ್ಲ. ನಂತರ ಅಪಘಾತದಲ್ಲಿ ಭಾಗಿಯಾಗಿದ್ದ ಮಹಿಳೆಯು ಮೃತಪಟ್ಟಿರುವ ವಿಚಾರ ನನಗೆ ತಿಳಿದು ಬಂದಿರುತ್ತದೆ ಎಂದರೆ ಸರಿಯಲ್ಲ.

ನಂತರ ದಿನಾಂಕ 24.07.2023 ರಂದು ಪೊಲೀಸರು ನನಗೆ ಅಪಘಾತವಾದ ಸ್ಥಳವನ್ನು ತೋರಿಸಿಕೊಡಲು ಹೇಳಿದ ಮೇರೆಗೆ ನಾನು ಅವರಿಗೆ ಪಂಚರಾದ ಚಾಸಾ 3 ಮತ್ತು 4 ರವರ ಸಮಕ್ಷಮ ಅಪಘಾತ ಸ್ಥಳವನ್ನು ತೋರಿಸಿಕೊಟ್ಟಿರುತ್ತೇನೆ ಎಂದರೆ

ಸರಿಯಲ್ಲ. ನಾನು ಅಪಘಾತ ನಡೆದ ಸ್ಥಳವನ್ನು ತೋರಿಸಿಕೊಟ್ಟ ಮೇರೆಗೆ ಪೊಲೀಸರು ಆ ದಿನ ಮಃ 02.00-02.30 ಮಧ್ಯದಲ್ಲಿ ನಿಪಿ2 ರಂತೆ ಮಹಜರ್ ಅನ್ನು ತಯಾರಿಸಿ ನಿಪಿ3 ರಿಂದ 5 ರಂತೆ ಪೋಟೋಗಳನ್ನು ತೆಗೆದಿರುತ್ತಾರೆ ಎಂದರೆ ಸರಿಯಲ್ಲ. ನಿಪಿ2 ಮಹಜರ್ ನಲ್ಲಿ ಇರುವ ವಿಚಾರಗಳನ್ನು ನಾನು ಓದಿ ತಿಳಿದುಕೊಂಡ ಮೇರೆಗೆ ಅದಕ್ಕೆ ಸಹಿ ಮಾಡಿರುತ್ತೇನೆ ಎಂದರೆ ಸರಿಯಲ್ಲ.

ಈ ಪ್ರಕರಣದ ಬಗ್ಗೆ ನನಗೆ ಸಂಪೂರ್ಣ ಮಾಹಿತಿ ಇದ್ದರೂ ಈಗ ಆರೋಪಿಯ ಜೊತೆ ಶಾಮಿಲಾಗಿ ನ್ಯಾಯಾಲಯದಲ್ಲಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

**:: ಪಾಟೀ ಸವಾಲು :: ಆರೋಪಿ ಪರ ಶ್ರೀಮತಿ ಎಸ್ ಎಂ ವಕೀಲರಿಂದ ::**

**( ಪಾಟೀ ಸವಾಲು ಇರುವುದಿಲ್ಲ)**

**:: ಮರುವಿಚಾರಣೆ ಇಲ್ಲ ::**

(ತೆರೆದ ನ್ಯಾಯಾಲಯದಲ್ಲಿ ನನ್ನ ಹೇಳಿಕೆಯಂತೆ ಗಣಕ ಯಂತ್ರದಲ್ಲಿ ಬೆರಳಚ್ಚು ಮಾಡಲಾಯಿತು)

ಓ ಹೇ ಕೇ ಸರಿ ಇದೆ.

sd/-

ಸಿ.ಜೆ. ಮತ್ತು ಹೆ. ಜೆ.ಎಮ್.ಎಫ್.ಸಿ.,

ತರೀಕೆರೆ .